ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ
ನಂದಿನಗರ, ಅಂಚೆ ಪೆಟ್ಟಿಗೆ ಸಂ. 6, ಬೀದರ – 585 226, ಕರ್ನಾಟಕ

**ಕುಲಸಚಿವರ ಕಛೇರಿ**

Phone : 08482 – 245241
Email : regkvafsu@gmail.com
Website : www.kvafsu.edu.in

ಸಂಖ್ಯೆ :ಕುಸ/ಶೈಕ್ಷಣಿಕ/33.3/ಪಸಂ/ಡಿ-ಪ್ರವೇಶ/2023-24 ದಿನಾಂಕ: 16.06.2023

# ಅಧಿಸೂಚನೆ

**ವಿಷಯ:**- 2023-2024ನೇ ಶೈಕ್ಷಣಿಕ ಸಾಲಿನ ಪಶುಸಂಗೋಪನಾ ಡಿಪ್ಲೋಮಾ ಪ್ರವೇಶ ಕುರಿತು.
**ಉಲ್ಲೇಖ:**1.ಸಂಖ್ಯೆ:ವಿನಿ/ಶೈಕ್ಷಣಿಕ/ಪಸಂ-ಡಿಪ್ಲೋಮಾ-ಪ್ರವೇಶ/2023-24,ದಿನಾಂಕ:12-06-2023
2.Proceedings of the 39th Academic Council Meeting, No.R/39th ACM-Proceed/2023-24, Date:12-06-2023.
3.ಮಾನ್ಯ ಕುಲಪತಿಗಳ ಅನುಮೋದನೆ ನಂ. 16791, ದಿನಾಂಕ: 14.06.2023

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ವ್ಯಾಪ್ತಿಯಲ್ಲಿ 2023-24ನೇ ಶೈಕ್ಷಣಿಕ ಸಾಲಿಗೆ ಪಶುಸಂಗೋಪನೆಯಲ್ಲಿ 2 ವರ್ಷ ಅವಧಿಯ ಡಿಪ್ಲೋಮಾ ಕೋರ್ಸಿನ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸುವ ಕುರಿತು.

**1. ಕೋರ್ಸ್‌ಗಳ ವಿವರ:**

| ಕ್ರ.ಸಂ | ಕೋರ್ಸ್‌ಗಳು | ವಿದ್ಯಾರ್ಹತೆ | ಪಾಲಿಟೆಕ್ನಿಕ್ | ಲಭ್ಯವಿರುವ ಒಟ್ಟು ಸೀಟು |
|---|---|---|---|---|
| 01 | ಪಶುಸಂಗೋಪನಾ ಡಿಪ್ಲೋಮಾ | ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ/ ತತ್ಸಮಾನ ಪರೀಕ್ಷೆಯೊಂದಿಗೆ ಕನ್ನಡ ಒಂದು ವಿಷಯವನ್ನು ಕಡ್ಡಾಯವಾಗಿ ಓದಿ ಕನಿಷ್ಠ ಶೇ. 45 ರಷ್ಟು ಅಂಕಗಳನ್ನು ಪಡೆದು ತೇರ್ಗಡೆಯಾಗಿರಬೇಕು (ಪ.ಜಾತಿ/ಪ.ಪಂಗಡ/ಪ್ರವರ್ಗ-1ರ ಅಭ್ಯರ್ಥಿಗಳು ಶೇ.40 ರಷ್ಟು ಅಂಕಗಳನ್ನು ಪಡೆದು ತೇರ್ಗಡೆ-ಯಾಗಿರಬೇಕು) ಮತ್ತು ಕಡ್ಡಾಯವಾಗಿ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಮಾಡಿರಬೇಕು. | 1) ಪಶುಸಂಗೋಪನಾ ಪಾಲಿಟೆಕ್ನಿಕ್, ಜಾನುವಾರು ಸಂಶೋಧನಾ ಹಾಗೂ ಮಾಹಿತಿ ಕೇಂದ್ರ, ಕೊನೆಹಳ್ಳಿ, ತಿಪಟೂರ ತಾಲ್ಲೂಕು, ತುಮಕೂರು ಜಿಲ್ಲೆ | 50 |
| | | | 2) ಪಶುಸಂಗೋಪನಾ ಪಾಲಿಟೆಕ್ನಿಕ್, ಕುನ್ನೂರು, ಶಿಗ್ಗಾಂವ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ | 50 |

**ವಯೋಮಿತಿ:** ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ 20.07.2023ರಂದು ಅಭ್ಯರ್ಥಿಯ ವಯಸ್ಸು 20 ವರ್ಷ ಮೀರಿರಬಾರದು.

**ಬೋಧನಾ ಮಾಧ್ಯಮ:**

- ಪಶುಸಂಗೋಪನಾ ಡಿಪ್ಲೋಮಾದ ತರಗತಿಗಳನ್ನು ಕನ್ನಡ ಮಾಧ್ಯಮದಲ್ಲಿ ನಡೆಸಲಾಗುವುದು.

**ಶಿಷ್ಯ ವೇತನ:**

- ಪ್ರವೇಶ ಪಡೆದ ಎಲ್ಲಾ ಅಭ್ಯರ್ಥಿಗಳಿಗೆ ರೂ.1000/-ಗಳ ಮಾಸಿಕ ಶಿಷ್ಯ ವೇತನವನ್ನು ವ್ಯಾಸಂಗದ ಅವಧಿಯಲ್ಲಿ ನಿಯಮಾನುಸಾರ ನೀಡಲಾಗುವುದು.

**ಅರ್ಜಿಯೊಂದಿಗೆ ಸಲ್ಲಿಸಬೇಕಾದ ಅಡಕಗಳು:**

- ಅರ್ಜಿ ನಮೂನೆಯನ್ನು ವಿಶ್ವವಿದ್ಯಾಲಯದ ಜಾಲತಾಣ(www.kvafsu.edu.in)ದಲ್ಲಿ ದಿನಾಂಕ 21.06.2023 ರಿಂದ ಪಡೆಯಬಹುದು.
- ಅರ್ಜಿಯೊಂದಿಗೆ ಮೂಲ ಡಿಮ್ಯಾಂಡ್ ಡ್ರಾಫ್ಟ್ **(Original DD)ಯನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.** ಡಿ.ಡಿ. ಲಗತ್ತಿಸದ ಅರ್ಜಿಯನ್ನು ತಿರಸ್ಕರಿಸಲಾಗುವುದು.

ಪು.ತಿ.ನೊ...2.

**ಡಿ.ಡಿ ಮಾಹಿತಿ**

| ಸಾಮಾನ್ಯ | ಪ.ಜಾ/ಪ.ಪ./ಪ್ರವರ್ಗ-1 ಅಭ್ಯರ್ಥಿಗಳಿಗೆ | ಡಿ.ಡಿ.ಇವರ ಹೆಸರಿನಲ್ಲಿ ಸಲ್ಲಿಸಬೇಕು |
|---|---|---|
| ರೂ.500/- | ರೂ. 250/- (ಜಾತಿ ಪ್ರಮಾಣ ಪತ್ರದ ನಕಲು ಪ್ರತಿಯನ್ನು ಸಲ್ಲಿಸಬೇಕು) | ಹಣಕಾಸು ನಿಯಂತ್ರಣಾಧಿಕಾರಿಗಳು, ಕಪಪಮೀವಿವಿ., ಬೀದರ (**Comptroller, KVAFSU, Bidar**) |

- ಅರ್ಜಿಯಲ್ಲಿ ನಮೂದಿಸಿದ ಪ್ರಮಾಣ ಪತ್ರಗಳ ಧೃಢೀಕರಿಸಿದ ನಕಲು ಪ್ರತಿಗಳನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಬೇಕು.
- ಭರ್ತಿ ಮಾಡಿದ ಅರ್ಜಿಯ ಲಕೋಟೆ ಮೇಲೆ **"ಪಶುಸಂಗೋಪನಾ ಡಿಪ್ಲೋಮಾ ಪ್ರವೇಶದ ಅರ್ಜಿ"** ಎಂದು ನಮೂದಿಸಿ ದಿನಾಂಕ: 20.07.2023ರ ಸಾಯಂಕಾಲ 5.00 ಗಂಟೆ ಒಳಗೆ **"ಕುಲಸಚಿವರು, ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ನಂದಿನಗರ, ಅಂಚೆ ಪೆಟ್ಟಿಗೆ ಸಂ. 6, ಬೀದರ – 585 226"** ಇವರಿಗೆ ತಲುಪುವಂತೆ ಸಲ್ಲಿಸಬೇಕು. ನಿಗದಿತ ಸಮಯದೊಳಗೆ ತಲುಪದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಅರ್ಜಿಯೊಂದಿಗೆ ಲಗತ್ತಿಸಬೇಕಾದ ಪ್ರಮಾಣ ಪತ್ರಗಳು:**

- ಎಸ್.ಎಸ್.ಎಲ್.ಸಿ. ಅಂಕ ಪಟ್ಟಿ (ಕಂಪ್ಯೂಟರ್ ಪ್ರಿಂಟ್ ಇದ್ದಲ್ಲಿ ಮುಖ್ಯ ಗುರುಗಳ ಸಹಿ ಹಾಗೂ ಮೊಹರು ಹೊಂದಿರಬೇಕು).
- 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿದ **"ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ"** (ನಿಗದಿತ ದಿನಾಂಕದ ಒಳಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಸಹಿ ಹಾಗೂ ಮೊಹರ ಹೊಂದಿರಬೇಕು).
- ಮೀಸಲಾತಿ ಬಯಸುವ ಅಭ್ಯರ್ಥಿಯು ಸಂಬಂಧಪಟ್ಟ ಪ್ರಾಧಿಕಾರದಿಂದ ಸೂಕ್ತವಾದ ಜಾತಿ ಪ್ರಮಾಣ ಪತ್ರ.
- ಅನುಚ್ಛೇದ 371(ಜೆ) ರಂತೆ ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಾಗಿದ್ದರೆ ಸೂಕ್ತವಾದ ಪ್ರಮಾಣ ಪತ್ರ. (ಪ್ರಮಾಣ ಪತ್ರವನ್ನು ಸಹಾಯಕ ಆಯುಕ್ತರವರಿಂದ ಪಡೆಯತಕ್ಕದ್ದು).
- ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ.50% ರಷ್ಟು ಸೀಟುಗಳನ್ನು ಡಿಪ್ಲೋಮಾ (ಪಶುಸಂಗೋಪನೆ) ಕೋರ್ಸ್‌ನ ಪ್ರವೇಶಾತಿಗೆ ಮೀಸಲಿಡಲಾಗಿದೆ (ವಿವರಣಾ ಪತ್ರಿಕೆಯ ಕ್ರಮ ಸಂ. 7 ರಂತೆ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದು ಲಗತ್ತಿಸುವುದು).

**ಸೂಚನೆಗಳು:**

- ಅಭ್ಯರ್ಥಿಗಳು ಮೊಬೈಲ್ ನಂಬರ / ದೂರವಾಣಿ / ಇ-ಮೇಲ್ ಐಡಿಯನ್ನು ಅರ್ಜಿಯಲ್ಲಿ ಭರ್ತಿ ಮಾಡತಕ್ಕದ್ದು.
- ಅಭ್ಯರ್ಥಿಗಳು ಒಂದು ಬಾರಿ ಮಾತ್ರ ಅರ್ಜಿಯನ್ನು ಸಲ್ಲಿಸಬೇಕು ಹಾಗೂ ಸಲ್ಲಿಸಿದ ನಂತರ ಯಾವುದೇ ಕಾರಣಕ್ಕೂ ಅರ್ಜಿಯನ್ನು ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.
- ಅರ್ಜಿ ಸಲ್ಲಿಸುವ ಪ್ರಾರಂಭ ದಿನಾಂಕ: **21.06.2023**
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **20.07.2023**
- ಸರ್ಕಾರದ ಆದೇಶಗಳ ಅನ್ವಯ ಸೀಟುಗಳನ್ನು ಭರ್ತಿ ಮಾಡಲಾಗುವುದು, ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ರೋಸ್ಟರ್ ಪದ್ಧತಿಯನ್ನು ಅಳವಡಿಸಿ ನೇರ ಮೌಖಿಕ ಸಂದರ್ಶನವನ್ನು **ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರನ ನಂದಿನಗರ** ಆವರಣದಲ್ಲಿ ನಡೆಸಲಾಗುವುದು.
- ನೇರ ಮೌಖಿಕ ಸಂದರ್ಶನಕ್ಕೆ ಅರ್ಹತೆ ಪಡೆದ ಅಭ್ಯರ್ಥಿಯ ಪಟ್ಟಿಯನ್ನು ದಿನಾಂಕ 17.08.2023 ರಂದು ವಿಶ್ವವಿದ್ಯಾಲಯದ ಜಾಲತಾಣ (www.kvafsu.edu.in) ದಲ್ಲಿ ಪ್ರಕಟಿಸಲಾಗುವುದು.
- ಈ ವಿಷಯಕ್ಕೆ ಸಂಬಂಧಿಸಿದಂತೆ ಪ್ರತಿ ಅಭ್ಯರ್ಥಿಗೆ ಪ್ರತ್ಯೇಕವಾಗಿ ಮಾಹಿತಿಯನ್ನು ತಿಳಿಸುವುದಿಲ್ಲ.
- ನೇರ ಮೌಖಿಕ ಸಂದರ್ಶನವನ್ನು ದಿನಾಂಕ **24.08.2023** ರಂದು ಬೆಳಗ್ಗೆ 10.00 ಗಂಟೆಗೆ **ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರನ ನಂದಿನಗರ** ಆವರಣದಲ್ಲಿ ನಡೆಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಕೋರ್ಸ್‌ಗೆ ನಿಗದಿಪಡಿಸಿದ ಶುಲ್ಕವನ್ನು ಸಂದರ್ಶನದ ದಿನದಂದು ಪಾವತಿ ಮಾಡಬೇಕು. ಇಲ್ಲಿ ಪ್ರವೇಶಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಆಯಾ ಪಶು ಸಂಗೋಪನಾ ಡಿಪ್ಲೋಮಾ ಕಾಲೇಜುಗಳಲ್ಲಿ ದಿನಾಂಕ: **31.08.2023**ರ **5.00** ಗಂಟೆಯ ಒಳಗೆ ಪ್ರವೇಶ ಪಡೆಯಬೇಕು. ಸದರಿ ದಿನಾಂಕದೊಳಗೆ ಪ್ರವೇಶಾತಿ ಪಡೆಯದೆ ಇರುವ ಅಭ್ಯರ್ಥಿಗಳ ಪ್ರವೇಶಾತಿಯು ರದ್ದಾಗುವುದು.
- ಮೊದಲನೆಯ ಸೆಮಿಸ್ಟರ್ ತರಗತಿಗಳ ಪ್ರಾರಂಭದ ದಿನಾಂಕ: **04.09.2023.**
- ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ಪು.ತಿ.ನೊ...3.

| ಪ್ರವೇಶ ಪ್ರಕ್ರಿಯೆಯ ವಿವರ | ದಿನಾಂಕ |
|---|---|
| ಅಧಿಸೂಚನೆ | 16.06.2023 |
| ಅರ್ಜಿ ಸಲ್ಲಿಸುವ ಪ್ರಾರಂಭದ ದಿನಾಂಕ | 21.06.2023 |
| ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ | 20.07.2023 |
| ಅರ್ಜಿ ಪರಿಶೀಲನೆ (ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರನಲ್ಲಿ) | 01.08.2023 ರಿಂದ 05.08.2023 |
| ಅರ್ಜಿ ಮರುಪರಿಶೀಲನೆ (ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರನಲ್ಲಿ) | 09.08.2023 ರಿಂದ 12.08.2023 |
| ವಿಶ್ವವಿದ್ಯಾಲಯದ (www.kvafsu.edu.in) ಜಾಲತಾಣದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ | 17.08.2023 |
| ನೇರ ಮೌಖಿಕ ಸಂದರ್ಶನ (ಕೌನ್ಸೆಲಿಂಗ್) (ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಿದ ಎಲ್ಲಾ ಮೂಲ ದಾಖಲೆಗಳೊಂದಿಗೆ **ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರನ ನಂದಿನಗರ** ಆವರಣದಲ್ಲಿ ಕಡ್ಡಾಯವಾಗಿ ಸಾದರಪಡಿಸುವುದು. ಒಂದು ವೇಳೆ ಮೂಲದಾಖಲಾತಿಗಳನ್ನು ಯಾವುದೇ ಕಾರಣಕ್ಕಾಗಿ ಸಾದರಪಡಿಸದಿದ್ದಲ್ಲಿ, ಅಭ್ಯರ್ಥಿಗಳಿಗೆ ಪ್ರವೇಶಕ್ಕೆ ಪರಿಗಣಿಸಲಾಗುವುದಿಲ್ಲ) | 24.08.2023 |
| ಆಯ್ಕೆಯಾದ ಅಭ್ಯರ್ಥಿಗಳು ಸಂಬಂಧ ಪಟ್ಟ ಪಶು ಸಂಗೋಪನೆ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರಿಗೆ ಮೂಲ ದಾಖಲಾತಿಗಳೊಂದಿಗೆ ಸಂಪರ್ಕಿಸಿ ಪ್ರವೇಶ ಪಡೆಯುವ ಕೊನೆಯ ದಿನಾಂಕ | 31.08.2023 |
| ಶೈಕ್ಷಣಿಕ ವರ್ಷದ ಆರಂಭ | 04.09.2023 |

**ವಿಶೇಷ ಸೂಚನೆ:** ಡಿಪ್ಲೋಮಾ (ಪಶುಸಂಗೋಪನೆ) ಕೋರ್ಸ್ ಯುವ ಜನತೆಗೆ ಸ್ವಯಂ ಉದ್ಯೋಗವನ್ನು ಕೈಗೊಳ್ಳುವ ಉದ್ದೇಶವನ್ನು ಹೊಂದಿದೆ. ಸತತವಾಗಿ ಪಶುಸಂಗೋಪನೆ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರೊಂದಿಗೆ ಪಶು ಸಂಬಂಧಿತ ಉತ್ಪಾದನೆಯನ್ನು ಹೆಚ್ಚಿಸುವ ಕುರಿತು ಜ್ಞಾನವನ್ನು ಪಡೆಯುವಲ್ಲಿ ನೆರವಾಗುತ್ತದೆ. ವಿಶ್ವವಿದ್ಯಾಲಯ ಮತ್ತು ಕರ್ನಾಟಕ ಸರ್ಕಾರದ ವತಿಯಿಂದ ಡಿಪ್ಲೋಮಾ (ಪಶುಸಂಗೋಪನೆ) ಕೋರ್ಸ್‌ನ್ನು ಮುಗಿಸಿದ ಅಭ್ಯರ್ಥಿಗಳಿಗೆ ಯಾವುದೇ ಖಚಿತ ಸರ್ಕಾರಿ ಉದ್ಯೋಗದ ಕುರಿತು ಭರವಸೆ ಇರುವುದಿಲ್ಲ.

ಕುಲಸಚಿವರು

ಕುಲಸಚಿವರು
ಕರ್ನಾಟಕ ಪಶುವೈದ್ಯಕೀಯ ಮತ್ತು
ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ,
ನಂದಿನಗರ ಬೀದರ - 585 401